





(6ನೇ ಪುಟದಿಂದ)

ಈ ಸಹಭಾಗಿತ್ವದ ಫಲವಾಗಿ ಸ್ಪೇಸ್ ಶಿಪ್ ಒನ್‌ನ ಸುಧಾರಿತ ಆವೃತ್ತಿ 'ಎಸ್‌ಎಸ್ ಎಂಟರ್‌ಪ್ರೈಸ್' ಎಂಬ ಹೆಸರಿನಲ್ಲಿ ಇದೀಗ ಸಿದ್ಧವಾಗಿದೆ. ಈ ಅಂತರಿಕ್ಷ ವಾಹನ ಬಳಸಿ ಆಸಕ್ತರಿಗೆ ಅಂತರಿಕ್ಷಕ್ಕೆ ಹೋಗಿಬರುವ ಅವಕಾಶ ಕಲ್ಪಿಸುವುದು ವರ್ಜಿನ್ ಸಂಸ್ಥೆಯ ಮುಖ್ಯಸ್ಥ ರಿಚರ್ಡ್ ಬ್ರಾನ್ಸನ್ ಗುರಿ.

ಮುಂದಿನ ಹದಿನೆಂಟು ತಿಂಗಳುಗಳ ಕಾಲ ವಿವಿಧ ಪರೀಕ್ಷೆಗಳಿಗೆ ಒಳಪಡಲಿರುವ 'ಎಸ್‌ಎಸ್ ಎಂಟರ್‌ಪ್ರೈಸ್' ಆನಂತರ ತನ್ನ ವಾಣಿಜ್ಯ ಸೇವೆ ಪ್ರಾರಂಭಿಸಲಿದೆ. ಅಷ್ಟು ಹೊತ್ತಿಗೆ ಅದರ ಹಾರಾಟಕ್ಕೆ ಬೇಕಾದ ಸ್ಪೇಸ್‌ಪೋರ್ಟ್ (ಅಂತರಿಕ್ಷ ಬಂದರು) ಕೂಡ ಸಿದ್ಧವಾಗಲಿದೆ.

ಈ ಅಂತರಿಕ್ಷ ವಾಹನದಲ್ಲಿ ಆರು ಜನ ಪ್ರವಾಸಿಗರ ಜೊತೆಗೆ ಇಬ್ಬರು ಸಿಬ್ಬಂದಿ ಪ್ರಯಾಣಿಸಬಹುದು. ಸುಮಾರು ಹದಿನೈದು ಕಿಲೋಮೀಟರ್ ಎತ್ತರದ ವರೆಗೆ 'ವೈಟ್ ನೈಟ್' ಎಂಬ ಮಾತೃನೌಕೆಯ ಬೆನ್ನೇರಿ ಸವಾರಿ ಮಾಡುವ ಈ ಅಂತರಿಕ್ಷ ವಾಹನ ಅಲ್ಲಿ ಮಾತೃನೌಕೆಯಿಂದ ಬೇರ್ಪಟ್ಟು ಗಂಟೆಗೆ ನಾಲ್ಕು ಸಾವಿರ ಕಿಲೋಮೀಟರ್ ವೇಗದಲ್ಲಿ ಮೇಲ್ಮುಖವಾಗಿ ಚಲಿಸಲಿದೆ; ಕೇವಲ ಒಂದೂವರೆ ನಿಮಿಷದಲ್ಲಿ ತನ್ನ ಪ್ರಯಾಣಿಕರನ್ನು 110 ಕಿಲೋಮೀಟರ್ ಎತ್ತರಕ್ಕೆ ಕೊಂಡೊಯ್ದು ಭಾರರಹಿತ ಸ್ಥಿತಿಯ ಅನುಭವ ನೀಡಲಿದೆ.

ಕ್ಷಣ ಮಾತ್ರದ್ದಾದರೂ ಅಪೂರ್ವವಾದ ಈ ಅನುಭವವನ್ನು ತಮ್ಮದಾಗಿಸಿಕೊಳ್ಳಲು ಕನಿಷ್ಠ 300 ಜನ ಈಗಾಗಲೇ ನೋಂದಾಯಿಸಿ ಕೊಂಡಿದ್ದಾರಂತೆ. ವರ್ಜಿನ್ ಸಂಸ್ಥೆ ಅವರಿಂದ ತಲಾ ಸುಮಾರು ಒಂದು ಕೋಟಿ ರೂಪಾಯಿ ಶುಲ್ಕ ಪಡೆಯುವ ನಿರೀಕ್ಷೆ ಇದೆ.